19. ವಿಷಯ: ಚಾಮರಾಜನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವ ಬಗ್ಗೆ.

****

ಶ್ರೀ ಸಿ. ಪುಟ್ಟರಂಗಶೆಟ್ಟಿ (ಚಾಮರಾಜನಗರ ಜಿಲ್ಲೆ): ಮಾನ್ಯ ಅಧ್ಯಕ್ಷರೆ, ಚಾಮರಾಜನಗರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, ವಿವರವಾಗಿರತಕ್ಕಂತಹ ಉತ್ತರವನ್ನು ಮಾನ್ಯ ಸದಸ್ಯರಿಗೆ ಒದಗಿಸಲಾಗಿದೆ.

ಉಪಾಧ್ಯಕ್ಷರು: ಉತ್ತರದಲ್ಲಿರುವುದನ್ನು ಬಿಟ್ಟು ಬೇರೆ ಏನಾದರೂ ಇದ್ದರೆ ಮಾತ್ರ ಹೇಳಿ.

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು): ಚಾಮರಾಜನಗರ ಜಿಲ್ಲೆಯ ಎಲ್ಲಾ ಶಾಸಕರು ಆಗಸ್ಟ್–2014ರ ಮಾಹೆಯ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಚಾಮರಾಜನಗರ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆಯನ್ನು ಚರ್ಚಿಸಿದ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಸುಮಾರು 325 ಗ್ರಾಮಗಳಲ್ಲಿ ಕುಡಿಯುವ ನೀರಿನ ತೀವ್ರ ಸಮಸ್ಯೆಯಿದ್ದು, ಬರಪರಿಹಾರ ಕಾರ್ಯಕ್ರಮದಡಿ ರೂ. 12.00 ಕೋಟಿ ಅನುದಾನವನ್ನು ತುರ್ತು ಕುಡಿಯುವ ನೀರಿನ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಲು ಕೋರಿರುತ್ತಾರೆ. ಜಿಲ್ಲೆಯಲ್ಲಿ ಶೇಕಡ 92ರಷ್ಟು ಮಳೆಯಾಗಿರುವುದರಿಂದ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯೆಂದು ಕಂದಾಯ ಇಲಾಖೆಯಿಂದ ಘೋಷಣೆಯಾಗದ ಪ್ರಯುಕ್ತ ಬರಪರಿಹಾರದಡಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಮಾರ್ಗಸೂಚಿಗಳನ್ವಯ ಅವಕಾಶವಿರುವುದಿಲ್ಲವೆಂದು ಈ ಯೋಜನೆಯನ್ನು ಕೈಬಿಡಲಾಗಿದೆ.

2014–15ನೇ ಸಾಲಿನಲ್ಲಿ ನೀರಿನ ಸಮಸ್ಯೆ ತಲೆದೋರಿರುವ ಗ್ರಾಮಗಳಿಗೆ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿರುವ ಟಾಸ್ಕ್‌ಫೋರ್ಸ್ ಯೋಜನೆಯಡಿ ರೂ. 1.80 ಕೋಟಿ ಹಾಗೂ 2015–16ನೇ ಸಾಲಿನಲ್ಲಿ ರೂ. 1.80 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಇದಲ್ಲದೆ ಕೇಂದ್ರ ಪುರಸ್ಕೃತ NRDWPಯಡಿ 2014–15ನೇ ಸಾಲಿನಲ್ಲಿ ರೂ. 48.42 ಕೋಟಿ ಮತ್ತು 2015–16ನೇ ಸಾಲಿನಲ್ಲಿ ರೂ. 9.46 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಮುಂದುವರೆದು 2015–16ನೇ ಸಾಲಿನ ವಾರ್ಷಿಕ ಕ್ರಿಯಾಯೋಜನೆಯಡಿ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳನ್ನೊಳಗೊಂಡಂತೆ ಆದ್ಯತೆ ಮೇರೆಗೆ ಕ್ರಿಯಾ ಯೋಜನೆಯನ್ನು ರೂಪಿಸಿ ನೀರಿನ ಸಮಸ್ಯೆಯಿರುವ ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕಾರ್ಯನಿರ್ವಾಹಕ ಅಭಿಯಂತರರಿಗೆ ಸೂಚನೆ ನೀಡಲಾಗಿದೆ. ಚಾಮರಾಜನಗರ ಮತ್ತು ಗುಂಡ್ಲುಪೇಟೆ ತಾಲ್ಲೂಕುಗಳಲ್ಲಿ 297 ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು DBOT ಯೋಜನೆಯಡಿಯಲ್ಲಿ ರೂ. 497.80 ಕೋಟಿಗಳ ಮೊತ್ತದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಸರ್ಕಾರದ ಅನುಮೋದನೆ ನೀಡಲಾಗಿದ್ದು ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.

ಶ್ರೀ ಸಿ. ಪುಟ್ಟರಂಗಶೆಟ್ಟಿ: ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಉತ್ತರವನ್ನು ಕೊಟ್ಟಿದ್ದಾರೆ. ಚಾಮರಾಜನಗರ ಜಿಲ್ಲೆಯಲ್ಲಿ ಚಾಮರಾಜನಗರ ತಾಲ್ಲೂಕು ಪ್ರತಿ ವರ್ಷ ಕರ್ನಾಟಕದಲ್ಲಿ ಬರ ತಾಲ್ಲೂಕೆಂದು declare ಆಗುತ್ತಿತ್ತು. ಇವರು ಜಿಲ್ಲೆಯಲ್ಲಿ ಆಗಿರುವ ಮಳೆಯ ಸರಾಸರಿ ಪ್ರಮಾಣವನ್ನು ತೆಗೆದುಕೊಂಡು ತಾಲ್ಲೂಕನ್ನು ಬರ ಅಲ್ಲವೆಂದು ಘೋಷಣೆ ಮಾಡಿದ್ದಾರೆ. ಆದರೆ ಇವತ್ತಿಗೂ ಆ ತಾಲ್ಲೂಕಿನಲ್ಲಿ ಬರ ಇದೆ ಮತ್ತು ಕುಡಿಯುವ ನೀರಿಗೆ ಬಹಳ ಹಾಹಾಕಾರವಿದೆ. ಸುಮಾರು ನನ್ನ ಕ್ಷೇತ್ರಕ್ಕೆ ಇವತ್ತು 7 ಕೋಟಿ ರೂ.ಗಳು ಬೇಕಾಗುತ್ತದೆ. ನನ್ನ ಕ್ಷೇತ್ರಕ್ಕೆ ಸುಮಾರು 7 ಕೋಟಿ ರೂ.ಗಳು ಬೇಕಾಗುತ್ತದೆ. ಕೊರೆದಿರುವ ಬೋರ್‌ವೆಲ್‌ಗೆ ನಾವು 3 ಕೋಟಿ ರೂ.ಗಳು ಕೊಡಬೇಕು. ಬರ ಇಲ್ಲ, ಹಾಗಾಗಿ ನಿಮಗೆ ಕೊಟ್ಟಿರುವಂತಹ 12 ಕೋಟಿ

ರೂಪಾಯಿ ಕೊಡುವುದಕ್ಕೆ ಬರುವುದಿಲ್ಲವೆಂದು ಹೇಳಿದ್ದಾರೆ. ಚಾಮರಾಜ ತಾಲ್ಲೂಕು ಬರ ಎಂದು ಘೋಷಣೆ ಆಗಬೇಕು ಮತ್ತು ಕುಡಿಯುವ ನೀರಿಗೆ ಹಣ ಬಿಡುಗಡೆಯಾಗಬೇಕು.

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಉಪಾಧ್ಯಕ್ಷರೆ, ಬರಗಾಲ ಎನ್ನುವ ಹಿನ್ನೆಲೆಯೊಳಗೆ ಅನುದಾನ ಕೊಡಬೇಕೆಂದು ಅವರು ಕೇಳಿದ್ದಾರೆ. ಆದರೆ, ತುರ್ತು ಕುಡಿಯುವ ನೀರಿನ ಕಾಮಗಾರಿಗಳಿಗಾಗಿ ಏನು ಅನುದಾನವನ್ನು ಅವರು ಕೇಳುತ್ತಿದ್ದಾರೆ, ಅದನ್ನು ಪ್ರತ್ಯೇಕವಾಗಿ NRDWP ಅಡಿ ಅವರಿಗೆ ಒದಗಿಸಿ ಕೊಡುತ್ತೇವೆ.

20. ವಿಷಯ: 2015–16ನೇ ಸಾಲಿನಲ್ಲಿ 14ನೇ ಹಣಕಾಸು ಯೋಜನೆಯಡಿಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಅನುದಾನ ಬಿಡುಗಡೆಯಾಗದಿರುವುದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವ ಕುರಿತು.

* * *

ಶ್ರೀ ಹೆಚ್.ಡಿ. ರೇವಣ್ಣ (ಹೊಳೆನರಸೀಪುರ): ಮಾನ್ಯ ಉಪಾಧ್ಯಕ್ಷರೆ, 14ನೇ ಹಣಕಾಸು ಯೋಜನೆಯ ಹಣ ಸುಮಾರು 1,000 ಕೋಟಿಗಳಷ್ಟು ಬರಬೇಕಾಗಿತ್ತು. ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿಗಳಿಗೆ ಇವತ್ತಿನವರೆಗೆ ಒಂದು ರೂಪಾಯಿ ಸಹ ಬಂದಿಲ್ಲ. ಈಗಾಗಲೇ 5 ತಿಂಗಳುಗಳಾಗಿದೆ. ಜಿಲ್ಲಾ ಪಂಚಾಯಿತಿಯಲ್ಲಿ ರಸ್ತೆಗಳಿಗೆ ಹಣ ಬರುತ್ತದೆಂದು ಒಂದೊಂದು Constituency ಯವರು ಕಾಯುತ್ತಿದ್ದಾರೆ. ಆದ್ದರಿಂದ ಕೇಂದ್ರ ಸರ್ಕಾರದಿಂದ ಕೊಡದೇ ಇದ್ದರೆ ರಾಜ್ಯ ಸರ್ಕಾರದಿಂದಲಾದರೂ ಹಣ ಕೊಟ್ಟಿರಿ, ಬಂದ ಮೇಲೆ ಕೇಂದ್ರ ಸರ್ಕಾರದಿಂದ ತಗೊಳ್ಳಿ ಎಂದು ನಾನು ಗ್ರಾಮೀಣಾಭಿವೃದ್ಧಿ ಸಚಿವರ ಗಮನ ಸೆಳೆಯುತ್ತಿದ್ದೇನೆ.

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): 14ನೇ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಐದು